ಲಾವಣ್ಯ ಕೊಲೆ ಆರೋಪಿ ಪೊಲೀಸ್ ಬಲೆಗೆ | ಇಲಿ ಪಾಷಾಣ ಸೇವಿಸಿದ್ದ ಆರೋಪಿ ಚೇತನ್‌ಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ

ಪ್ರೀತಿಸಲು ಪೀಡಿಸಿ ಪ್ರಾಣ ತೆಗೆದ ಪುಂಡ

■ **ವಿಕ ಸುದ್ದಿಲೋಕ** ಬಂಟ್ವಾಳ (ದ.ಕ.)

ಕರಾವಳಿಯನ್ನೇ ಬೆಚ್ಚಿಬೀಳಿಸಿದ್ದ ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಬಿ.ಸಿ.ರೋಡ್ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಗುರುವಾರ ಸಂಜೆ ನಡೆದ ಯುವತಿ ಲಾವಣ್ಯ ಹತ್ಯೆ ಪ್ರಕರಣದ ಆರೋಪಿ ಚೇತನ್ (22) ಶುಕ್ರವಾರ ಬೆಳಗ್ಗೆ ಮಂಗಳೂರಿನ ಪಚ್ಚನಾಡಿಯಲ್ಲಿ ಪೊಲೀಸರಿಗೆ ಸಿಕ್ಕಿಬಿದ್ದಿದ್ದಾನೆ.

ಈ ವೇಳೆ ತಾನು ಇಲಿ ಪಾಷಾಣ ಸೇವಿಸಿದ್ದಾಗಿ ತಿಳಿಸಿದ್ದು, ಕೂಡಲೇ ಆತನನ್ನು ಬಂಟ್ವಾಳ ಸರಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಅಲ್ಲಿ ವೈದ್ಯರ ಸಲಹೆ ಮೇರೆಗೆ ಹೆಚ್ಚಿನ ಚಿಕಿತ್ಸೆಗೆ ಸಂಜೆ ಮಂಗಳೂರಿನ ವೆನ್ಲಾಕ್ ಆಸ್ಪತ್ರೆಗೆ ದಾಖಲಿಸಲಾಯಿತು. ಸದ್ಯ ಆತನ ಸ್ಥಿತಿಯ ಕುರಿತು ವೈದ್ಯರು ನಿಗಾವಹಿಸಿದ್ದು, ಪೊಲೀಸರ ಬಿಗಿ ಭದ್ರತೆಯಲ್ಲಿ ಆತನಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಆರೋಪಿ ಚೇತರಿಸಿಕೊಂಡ ಬಳಿಕವಷ್ಟೇ ಹೆಚ್ಚಿನ ವಿಚಾರಣೆ ನಡೆಯಬೇಕಿದೆ. ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಅರುಣ್, ಆರೋಪಿ ಚೇತನ್‌ನನ್ನು ವಶಕ್ಕೆ ಪಡೆದಿರುವುದನ್ನು ಖಚಿತಪಡಿಸಿದ್ದಾರೆ.

ಅಸಹಾಯಕರಾಗಿ ಕೈಚೆಲ್ಲಿದ ಜನ: ಖಾಸಗಿ ಆಸ್ಪತ್ರೆ ಕೆಲಸದಿಂದ ಗುರುವಾರ ಸಂಜೆ ಮನೆಗೆ ತೆರಳಲು ಬಿ.ಸಿ.ರೋಡ್ ಬಸ್ ನಿಲ್ದಾಣದಲ್ಲಿ ಕಾಯುತ್ತಿದ್ದ ಯುವತಿಯ ಮೇಲೆ ಆರೋಪಿ ಚೇತನ್ ಹಠಾತ್ ದಾಳಿ ಮಾಡಿದ. ಹರಿತ ಕತ್ತಿಯ ಮೊದಲ ಏಟು ಬೀಳುತ್ತಲೇ ಲಾವಣ್ಯ ಜೀವ ಭಯದಿಂದ ಚೀರುತ್ತ ಓಡಿ ಹೋಗಲು ಯತ್ನಿಸಿದರು. ಬೆನ್ನತ್ತಿದ ಪಾತಕಿ, ಹತ್ತಾರು ಹೆಜ್ಜೆ ಅಂತರದಲ್ಲೇ ನೆಲಕ್ಕೆ ಕೆಡವಿ ಯುವತಿಯನ್ನು ಕೊಚ್ಚತೊಡಗಿದ. ಕತ್ತು, ಭುಜದ ಭಾಗಕ್ಕೆ ನಿರ್ದಯವಾಗಿ ಮಚ್ಚಿನ ಏಟುಗಳನ್ನು ಹಾಕಿ ಪರಾರಿಯಾದ. ತೀವ್ರ ರಕ್ತಸ್ರಾವದಿಂದ ಒದ್ದಾಡುತ್ತಿದ್ದ ಯುವತಿ ಸ್ಥಳದಲ್ಲೆ ಮೃತಪಟ್ಟಿದ್ದಳು. ಭಯಗ್ರಸ್ತ ಯುವತಿ 'ಕಾಪಾಡಿ...' ಎಂದು ಕೂಗುತ್ತ ಕುಸಿದು ಬಿದ್ದಾಗಲೂ ಸ್ಥಳದಲ್ಲಿದ್ದ ಜನ ದುಷ್ಕರ್ಮಿಯ ಕ್ರೌರ್ಯಕ್ಕೆ ಅಂಜಿ ಅಸಹಾಯಕರಾಗಿ ಕೈಚೆಲ್ಲಿ ನಿಂತರು. ಕೆಲವರು ಮೊಬೈಲ್ ಬಳಸಿ ದೂರದಿಂದಲೇ ವಿಡಿಯೊ ಚಿತ್ರೀಕರಿಸಿದರು. ''ಎಲ್ಲವೂ ಐದು ನಿಮಿಷಗಳ ಅಂತರದಲ್ಲಿ ಮುಗಿದು ಹೋಯಿತು,'' ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಏಕಪಕ್ಷೀಯ ಪ್ರೇಮ: ಯುವತಿ ಹಾಗೂ ಆರೋಪಿ ಚೇತನ್ ಇಬ್ಬರೂ ದೂರದ ಸಂಬಂಧಿಕರು ಎನ್ನುವುದು ಪೊಲೀಸ್ ತನಿಖೆಯಿಂದ ತಿಳಿದುಬಂದಿದೆ. ಆರೋಪಿ ಚೇತನ್ ಮೃತ ಯುವತಿಯನ್ನು ಏಕಪಕ್ಷೀಯವಾಗಿ ಪ್ರೀತಿಸುತ್ತಿದ್ದು, ಆಕೆ ಈತನ ಪ್ರೀತಿಯ ನಿವೇದನೆಯನ್ನು ಸ್ಪಷ್ಟವಾಗಿ ತಿರಸ್ಕರಿಸಿದ್ದಳು. ಇದೇ ದ್ವೇಷವನ್ನು ಮನಸ್ಸಿನಲ್ಲಿಟ್ಟುಕೊಂಡಿದ್ದ ಆರೋಪಿ, ಸಾರ್ವಜನಿಕ ಸ್ಥಳದಲ್ಲೇ ಹೊಂಚು ಹಾಕಿ ತಲವಾರಿನಿಂದ ಮನಬಂದಂತೆ ಇರಿದು ಬರ್ಬರವಾಗಿ ಕೊಲೆ ಮಾಡಿದ್ದಾನೆ.

ಹುಟ್ಟೂರಿನಲ್ಲಿ ಅಂತ್ಯಸಂಸ್ಕಾರ: ಲಾವಣ್ಯ ಅವರ ಮೃತದೇಹದ ಮರಣೋತ್ತರ ಪರೀಕ್ಷೆಯನ್ನು ದೇರಳಕಟ್ಟೆ ಆಸ್ಪತ್ರೆಯಲ್ಲಿ ನಡೆಸಲಾಯಿತು. ಬಳಿಕ ಅವರು ಕರ್ತವ್ಯ ನಿರ್ವಹಿಸುತ್ತಿದ್ದ ಕಲ್ಲಡ್ಕದ ಖಾಸಗಿ ನರ್ಸಿಂಗ್ ಹೋಂಗೆ ಮೃತದೇಹವನ್ನು ತರಲಾಗಿದ್ದು, ಆಸ್ಪತ್ರೆಯ ಸಿಬ್ಬಂದಿ, ವೈದ್ಯರು, ಸಹೋದ್ಯೋಗಿಗಳು ಹಾಗೂ ಸ್ನೇಹಿತರು ಭಾವಪೂರ್ಣ ಅಂತಿಮ ನಮನ ಸಲ್ಲಿಸಿದರು. ಅಲ್ಲಿಂದ ಸ್ವಗ್ರಾಮಕ್ಕೆ ಕೊಂಡೊಯ್ದಾಗ ಲಾವಣ್ಯ ನಿವಾಸದಲ್ಲಿ ಕುಟುಂಬದವರ ಆಕ್ರಂದನ ಮುಗಿಲು ಮುಟ್ಟಿತ್ತು. ಬಂಧು- ಬಳಗ, ಸ್ನೇಹಿತರು ಹಾಗೂ ಗ್ರಾಮಸ್ಥರು ಕಣ್ಣೀರಿನ ನಮನ ಸಲ್ಲಿಸಿದ ಬಳಿಕ ಅಂತ್ಯಸಂಸ್ಕಾರ ನೆರವೇರಿತು.

ಸುಳ್ಳು ಸುದ್ದಿಗೆ ಖಾಕಿ ಬಿಸಿ

ಲಾವಣ್ಯ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಕೋಮು ಸೌಹಾರ್ದತೆ ಕೆಡಿಸುವ ಹಾಗೂ ಪ್ರಚೋದನಾತ್ಮಕ ಸುಳ್ಳು ಪೋಸ್ಟ್‌ಗಳನ್ನು ಹರಡುತ್ತಿದ್ದ ಕಿಡಿಗೇಡಿಗಳಿಗೆ ಬಂಟ್ವಾಳ ಪೊಲೀಸರು ಬಿಸಿ ಮುಟ್ಟಿಸಿದ್ದಾರೆ. ಆರೋಪಿಯ ಫೋಟೊವನ್ನು ರಾಜಕೀಯ ಹಾಗೂ ಧಾರ್ಮಿಕ ಸಂಘಟನೆಗಳೊಂದಿಗೆ ತಳುಕು ಹಾಕಿ ಸುಳ್ಳು ಸುದ್ದಿ ಪ್ರಸಾರ ಮಾಡುತ್ತಿದ್ದ ಇನ್‌ಸ್ಟಾಗ್ರಾಂ, ಫೇಸ್‌ಬುಕ್ ಖಾತೆಗಳು ಹಾಗೂ ಹಲವು ವಾಟ್ಸ್‌ಆ್ಯಪ್ ಗ್ರೂಪ್‌ಗಳ ವಿರುದ್ಧ ಬಂಟ್ವಾಳ ನಗರ ಪೊಲೀಸ್ ಠಾಣೆಯಲ್ಲಿ ಮೂರು ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ.

ಸಾಹುಕಾರ್ ಸಸ್ಪೆಂಡ್‌ಗೆ ಸಂಪುಟ ಶಿಫಾರಸು ಮಾಡಿದೆಯೇ?

ಬೆಂಗಳೂರು: ಅಧಿಕಾರ ದುರುಪಯೋಗ ಹಾಗೂ ಸ್ವಜನಪಕ್ಷಪಾತ ಆರೋಪದ ಮೇಲೆ ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಅಧ್ಯಕ್ಷ ಸ್ಥಾನದಿಂದ ಶಿವಶಂಕರಪ್ಪ ಸಾಹುಕಾರ್ ಅವರನ್ನು ಅಮಾನತು ಮಾಡಲು ರಾಜ್ಯ ಸಂಪುಟದ ಸಚಿವರು ರಾಜ್ಯಪಾಲರಿಗೆ ಸಲಹೆ ಹಾಗೂ ಶಿಫಾರಸು ಮಾಡಿದ್ದಾರೆಯೇ ಎಂಬ ಬಗ್ಗೆ ಮಾಹಿತಿ ನೀಡುವಂತೆ ಹೈಕೋರ್ಟ್, ಸಿಬ್ಬಂದಿ ಹಾಗೂ ಆಡಳಿತ ಸುಧಾರಣೆ ಇಲಾಖೆ ಪ್ರಧಾನ ಕಾರ್ಯದರ್ಶಿಗೆ ಸೂಚಿಸಿದೆ.

■ ಕೆಪಿಎಸ್‌ಸಿ ಕರ್ಮಕಾಂಡ
■ ಮಾಹಿತಿ ನೀಡಲು ಹೈಕೋರ್ಟ್ ಸೂಚನೆ

ರಾಜ್ಯಪಾಲರು ಹೊರಡಿಸಿದ ಅಮಾನತು ಆದೇಶ ರದ್ದು ಕೋರಿ ಶಿವಶಂಕರಪ್ಪ ಸಾಹುಕಾರ್ ಸಲ್ಲಿಸಿರುವ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ಏಕಸದಸ್ಯ ಪೀಠ ಶುಕ್ರವಾರ ಈ ಸೂಚನೆ ನೀಡಿದೆ.

ಶಿವಶಂಕರಪ್ಪ ಸಾಹುಕಾರ್ ಪರ ಹಾಜರಾದ ಹಿರಿಯ ವಕೀಲ ಅರುಣ್ ಶ್ಯಾಮ್, ''ಅರ್ಜಿಯಲ್ಲಿ ರಾಜ್ಯ ಸರಕಾರದ ಸಿಬ್ಬಂದಿ ಹಾಗೂ ಆಡಳಿತ ಸುಧಾರಣಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅವರನ್ನು ಪ್ರತಿವಾದಿಯನ್ನಾಗಿ (ಪಕ್ಷಕಾರ) ಮಾಡಲಾಗಿದೆ,'' ಎಂದು ನ್ಯಾಯಪೀಠಕ್ಕೆ ತಿಳಿಸಿದರು.

ಆಗ ಪ್ರತಿಕ್ರಿಯಿಸಿದ ನ್ಯಾಯಪೀಠ, ಕೆಪಿಎಸ್‌ಸಿ ಅಧ್ಯಕ್ಷ ಸ್ಥಾನದಿಂದ ಅರ್ಜಿದಾರರನ್ನು ಅಮಾನತು ಮಾಡಲು ರಾಜ್ಯ ಸರಕಾರದ ಸಂಪುಟದ ಸಚಿವರು ರಾಜ್ಯಪಾಲರಿಗೆ ಸಲಹೆ ಹಾಗೂ ಶಿಫಾರಸು ಮಾಡಿದ್ದರೇ ಎಂಬ ಬಗ್ಗೆ ಮಾಹಿತಿ ನೀಡುವಂತೆ ರಾಜ್ಯ ಸಿಬ್ಬಂದಿ ಹಾಗೂ ಆಡಳಿತ ಸುಧಾರಣಾ ಇಲಾಖೆ ಪ್ರಧಾನ ಕಾರ್ಯದರ್ಶಿಗೆ ಸೂಚಿಸಿ ವಿಚಾರಣೆಯನ್ನು ಸೋಮವಾರಕ್ಕೆ ಮುಂದೂಡಿತು.

ಸಚಿವ ಸಂಪುಟದ ಸಲಹೆ ಹಾಗೂ ಶಿಫಾರಸು ಇಲ್ಲದೆಯೇ ರಾಜ್ಯಪಾಲರು ಅರ್ಜಿದಾರರ ಅಮಾನತು ಆದೇಶ ಹೊರಡಿಸಿದ್ದಾರೆ. ಅದು ಅಪಕ್ವ ಹಾಗೂ ಕಾನೂನುಬಾಹಿರ ಕ್ರಮವಾಗಿದೆ. ಹಾಗಾಗಿ, ಆದೇಶಕ್ಕೆ ತಡೆ ನೀಡಿ ಅರ್ಜಿದಾರರಿಗೆ ರಕ್ಷಣೆ ಕಲ್ಪಿಸಬೇಕು ಎಂದು ಅರ್ಜಿದಾರರ ಪರ ವಕೀಲರು ಅರ್ಜಿಯ ಹಿಂದಿನ ವಿಚಾರಣೆ ವೇಳೆ ನ್ಯಾಯಾಲಯವನ್ನು ಕೋರಿದ್ದರು.

ಆಗ ನ್ಯಾಯಪೀಠ, ''ರಾಜ್ಯ ಸರಕಾರದ ಸಚಿವ ಸಂಪುಟ ಸದಸ್ಯರ ಸಲಹೆಯಿಲ್ಲದೆ ಅರ್ಜಿದಾರರನ್ನು ಅಮಾನತು ಆದೇಶ ಮಾಡಲಾಗಿದೆಯೇ ಅಥವಾ ಇಲ್ಲವೇ ಎಂಬ ಬಗ್ಗೆ ಸರಕಾರವಷ್ಟೇ ಮಾಹಿತಿ ನೀಡಬೇಕಿದೆ. ಹಾಗಾಗಿ, ಸರಕಾರವನ್ನು ಅರ್ಜಿಯಲ್ಲಿ ಪ್ರತಿವಾದಿ ಮಾಡಬೇಕು,'' ಎಂದು ಸೂಚಿಸಿತ್ತು. ಆದರಂತೆ ಅರ್ಜಿಯಲ್ಲಿ ಸರಕಾರವನ್ನು ಪ್ರತಿವಾದಿಯನ್ನಾಗಿ ಮಾಡಲಾಗಿದೆ.

ಮುಚ್ಚುತ್ತಿದ್ದ ಸರಕಾರಿ ಶಾಲೆಗೆ ಗ್ರಾಮಸ್ಥರಿಂದ ಮರುಜೀವ

■ **ವಿಕ ಸುದ್ದಿಲೋಕ** ಪಾಂಡವಪುರ (ಮಂಡ್ಯ)

ಮಕ್ಕಳ ದಾಖಲಾತಿ ಕಡಿಮೆಯಾಗಿ ಮುಚ್ಚುವ ಹಂತಕ್ಕೆ ತಲುಪಿದ್ದ ಪಾಂಡವಪುರ ತಾಲೂಕಿನ ಕೆ.ಬೆಟ್ಟಹಳ್ಳಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಗ್ರಾಮಸ್ಥರು ಮರುಜೀವ ನೀಡಿದ್ದಾರೆ.

ಗ್ರಾಮದ ಯಜಮಾನರು ಸೇವಾ ಸಮಿತಿ ನಿರ್ಮಿಸಿಕೊಂಡು ಶಾಲೆಗೆ 54 ಮಕ್ಕಳನ್ನು ದಾಖಲಿಸುವ ಮೂಲಕ ಶಾಲೆಗೆ ಬೀಗ ಹಾಕುವುದನ್ನು ತಪ್ಪಿಸಿದ್ದಾರೆ.

ಪಾಂಡವಪುರ ಪಟ್ಟಣದಿಂದ ನಾಲ್ಕೈದು ಕಿ.ಮೀ. ದೂರದಲ್ಲಿರುವ ಈ ಶಾಲೆಗೆ 2026-27ನೇ ಸಾಲಿನಲ್ಲಿ 11 ಮಕ್ಕಳು ದಾಖಲಾದ ಕಾರಣ ಶಾಲೆಯನ್ನು ಮುಚ್ಚಿ ಮಕ್ಕಳನ್ನು ಪಕ್ಕದ ಎಲೆಕೆರೆ ಸರಕಾರಿ ಶಾಲೆಗೆ ವರ್ಗಾಹಿಸಲು ಇಲಾಖೆ ಮುಂದಾಗಿತ್ತು. ವಿಚಾರ ತಿಳಿದ ಗ್ರಾಮಸ್ಥರು, ಗ್ರಾಪಂ ಕೇಂದ್ರ ಸ್ಥಾನದಲ್ಲಿರುವ ಈ ಶಾಲೆ ಸ್ಥಗಿತಗೊಂಡರೆ ಮತ್ತೆ ಶಾಲೆ ತರುವುದು ಕಷ್ಟವಾಗುತ್ತಿದೆ. ಇದರಿಂದ ಬಡ ಮಕ್ಕಳ ಓದಿಗೆ ಅನನುಕೂಲವಾಗಲಿದೆ ಎಂದು ನಮ್ಮೂರಿನ ಶಾಲೆಯನ್ನು ಉಳಿಸಿಕೊಳ್ಳಲೇಬೇಕೆಂದು ತೀರ್ಮಾನಿಸಿದರು.

ಈ ನಿಟ್ಟಿನಲ್ಲಿ ಯಜಮಾನರ ಗ್ರಾಮ ಸೇವಾ ಸಮಿತಿ ನಿರ್ಮಿಸಿಕೊಂಡು ಎಲ್ಲರೂ ಮನೆಮನೆ ಸರ್ವೆ ನಡೆಸಿ ಪೋಷಕರ ಮನವೊಲಿಸುವ ಮೂಲಕ ಈ ಸಾಲಿನಲ್ಲಿ ಹೊಸದಾಗಿ 43 ಮಕ್ಕಳನ್ನು ಶಾಲೆಗೆ ದಾಖಲಿಸಿದ್ದು, ಒಟ್ಟು 54 ಮಕ್ಕಳು ಶಾಲೆಯಲ್ಲಿ ದಾಖಲಾಗಿದ್ದಾರೆ. ಈ ಹಿಂದೆ ಕೇವಲ 11 ಮಕ್ಕಳು ಇದ್ದ ಕಾರಣ ಕೇವಲ ಇಬ್ಬರು ಶಿಕ್ಷಕರನ್ನು ಮಾತ್ರ ನಿಯೋಜಿಸಲಾಗಿತ್ತು. ಇದೀಗ 5 ಮಂದಿ ಶಿಕ್ಷಕರು ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಒಬ್ಬ ಶಿಕ್ಷಕರನ್ನು ನೇಮಕ ಮಾಡಲಾಗಿದೆ.

ಕನ್ನಡ ಮೇಷ್ಟ್ರುಗಳಿಗೆ ಗ್ರಹಣ

» ಮೊದಲ ಪುಟದಿಂದ

ಸಿಎಂಗೆ ಪ್ರಾಧಿಕಾರದ ಪತ್ರ: ಸರಕಾರದ ಈ ನಿರ್ಧಾರದ ವಿರುದ್ಧ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಆಕ್ರೋಶ ವ್ಯಕ್ತಪಡಿಸಿದೆ. ಈ ಕುರಿತು ಪ್ರಾಧಿಕಾರದ ಅಧ್ಯಕ್ಷ ಪ್ರೊ. ಪುರುಷೋತ್ತಮ ಬಿಳಿಮಲೆ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದು ಸರಕಾರದ ನಿಲುವನ್ನು ಖಂಡಿಸಿದ್ದಾರೆ.

''ಜಗತ್ತಿನಾದ್ಯಂತ ನಡೆದಿರುವ ಶಿಕ್ಷಣ ಸಂಶೋಧನೆಗಳು ಮಗುವಿನ ಬೌದ್ಧಿಕ ಮತ್ತು ಸೃಜನಶೀಲ ಬೆಳವಣಿಗೆಗೆ ಮಾತೃಭಾಷೆಯೇ ಅತ್ಯುತ್ತಮ ಮಾಧ್ಯಮ ಎಂದು ಸಾರಿವೆ. ಇಂತಹ ಸಂದರ್ಭದಲ್ಲಿ ತಾಯ್ನುಡಿಯ ಸ್ಥಾನವನ್ನು ದುರ್ಬಲಗೊಳಿಸುವುದು ಮುಂದಿನ ಪೀಳಿಗೆಗೆ ಕನ್ನಡದೊಂದಿಗಿನ ಸಾಂಸ್ಕೃತಿಕ ಮತ್ತು ಭಾವನಾತ್ಮಕ ಸಂಬಂಧವನ್ನು ಕಡಿದುಕೊಳ್ಳುವಂತೆ ಮಾಡುತ್ತದೆ. ಇದು ರಾಜ್ಯದ ಭಾಷಾ ನೀತಿಗೆ ಬಗೆಯುವ ಗಂಭೀರ ದ್ರೋಹ ಎಂದು ಆಕ್ಷೇಪಿಸಿದ್ದಾರೆ. ಅಲ್ಲದೆ, ಇಂಗ್ಲಿಷ್ ಕಡ್ಡಾಯದ ನಿಯಮವನ್ನು ತಕ್ಷಣವೇ ಹಿಂಪಡೆದು, ಕನ್ನಡ ಶಿಕ್ಷಕರ ನೇಮಕಾತಿಗೆ ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದ್ದಾರೆ.

ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು - 560099.
ದೂರವಾಣಿ: 080-27835122 ವೆಬ್‌ಸೈಟ್: www.anekal.tpa.gov.in, www.e-vinyasa.kar.nic.in

ಸಂಖ್ಯೆ: ಆಯೋಪ್ರಾ/ಭೂ.ಬ/15/2026-27 ದಿನಾಂಕ: 16-07-2026

ಪ್ರಕಟಣೆ

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಸೆಕ್ಷನ್ 14(ಎ) ಪ್ರಕಾರ ಅರ್ಜಿದಾರರು ಭೂ ಉಪಯೋಗ ಬದಲಾವಣೆಗೆ ಅರ್ಜಿ ಸಲ್ಲಿಸಿರುತ್ತಾರೆ. ಅರ್ಜಿಯನ್ನು ಪರಿಶೀಲಿಸಲಾಗಿ, ಅಡಕದಲ್ಲಿನ ಮಾಹಿತಿಯನ್ನು ಆಧರಿಸಿ ಕೆಳಕಂಡಂತೆ ವಿವರಗಳನ್ನು ಕೋಷ್ಟಕದಲ್ಲಿ ಅಳವಡಿಸಿದೆ. ಕಾಯ್ದೆಯಲ್ಲಿನ ಅಂಶಗಳನ್ವಯ ಪ್ರಸ್ತುತ ಪ್ರಕರಣಕ್ಕೆ ಸಂಬಂಧಿಸಿದಂತೆ, ಭೂ ಉಪಯೋಗ ಬದಲಾವಣೆಗೆ ಯಾರಿಂದಲಾದರು ಆಕ್ಷೇಪಣೆಗಳಿದ್ದರೆ ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ **ಸದಸ್ಯ-ಕಾರ್ಯದರ್ಶಿಗಳು, ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್** ಕಛೇರಿಗೆ ಸಲ್ಲಿಸಲು ಕೋರಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

ಕ್ರ. ಸಂ.	ಅರ್ಜಿದಾರರ ಹೆಸರು	ತಾಲ್ಲೂಕು	ಹೋಬಳಿ	ಗ್ರಾಮ	ಸ.ನಂ.	ವಿಸ್ತೀರ್ಣ (ಎ-ಗು)	ಅನುಮೋದಿತ ಮಹಾಯೋಜನೆ ಪ್ರಕಾರ ಭೂ ಉಪಯೋಗ	ಬದಲಾವಣೆ ಕೋರಿರುವ ಭೂ ಉಪಯೋಗ
1	ಶ್ರೀ ಜೆ.ವಿ. ರಮೇಶ ಬಿನ್ ಎನ್. ವೆಂಕಟಸ್ವಾಮಿ	ಆನೇಕಲ್	ಸರ್ಜಾಪುರ	ಜಂತಗೊಂಡನ ಹಳ್ಳಿ	6/1	1-17	ಕೃಷಿ	ವಸತಿ
2	ಶ್ರೀ ಜೆ.ವಿ. ಸತೀಶ್ ಬಿನ್ ಎನ್. ವೆಂಕಟಸ್ವಾಮಿ	ಆನೇಕಲ್	ಸರ್ಜಾಪುರ	ಜಂತಗೊಂಡನ ಹಳ್ಳಿ	6/2	0-30	ಕೃಷಿ	ವಸತಿ
3	ಶ್ರೀಮತಿ ಮುನಿರಾಜಮ್ಮ, ಶ್ರೀಮತಿ ಉಷಾ ಹಾಗೂ ಇತರರ ಪರವಾಗಿ ಜಿಪಿಎ ದಾರರಾದ ಮೆ: ಆದಿತ್ಯ ಹೋಮ್ಸ್ ಪರವಾಗಿ ವ್ಯವಸ್ಥಾಪಕ ಪಾಲುದಾರರಾದ ಶ್ರೀ ಕೆ. ಬಾಲಕೃಷ್ಣ ರೆಡ್ಡಿ	ಆನೇಕಲ್	ಸರ್ಜಾಪುರ	ಜಂತಗೊಂಡನ ಹಳ್ಳಿ	7/1	1-13	ಕೃಷಿ	ವಸತಿ
4	ಶ್ರೀ ಕೆ. ನಾರಾಯಣ ಬಿನ್ ಕೊಂಡಾರೆಡ್ಡಿ	ಆನೇಕಲ್	ಸರ್ಜಾಪುರ	ಜಂತಗೊಂಡನ ಹಳ್ಳಿ	9/1	1-17	ಕೃಷಿ	ವಸತಿ

ಪ್ರಸ್ತಾವನೆಯಲ್ಲಿನ ಪ್ರಶ್ನಿತ ಜಮೀನನ್ನು ವಸತಿ ಉದ್ದೇಶಕ್ಕೆ ಅಭಿವೃದ್ಧಿಪಡಿಸುವುದರಿಂದ ಬಡವರು, ಮಧ್ಯಮ ವರ್ಗದವರಿಗೆ ಯೋಗ್ಯಬೆಲೆಯಲ್ಲಿ ನಿವೇಶನಗಳು ಲಭ್ಯವಾಗುತ್ತದೆ. ವಿನ್ಯಾಸ ಅಭಿವೃದ್ಧಿ ಕಾಮಗಾರಿಗಳು ನಡೆಯುವಾಗ ಕೂಲಿ ಕಾರ್ಮಿಕರಿಗೆ ಉದ್ಯೋಗವಕಾಶ ದೊರಕುತ್ತದೆ. ವಿನ್ಯಾಸ ಅಭಿವೃದ್ಧಿಯಿಂದ ಸುತ್ತಮುತ್ತಲಿನ ಪ್ರದೇಶ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ಯೋಜನಾ ಬದ್ಧವಾಗ ವಿನ್ಯಾಸ ರಚನೆಯಿಂದ ಉತ್ತಮ ರಸ್ತೆಗಳು, ನಾಗರೀಕ ಸೌಲಭ್ಯ ಜಾಗಗಳು, ಉದ್ಯಾನವನಗಳು ಸಾರ್ವಜನಿಕ ಉಪಯೋಗಕ್ಕೆ ಲಭ್ಯವಾಗುತ್ತದೆ ಎಂಬ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ, ಸದರಿ ಪ್ರದೇಶವನ್ನು **"ಕೃಷಿ"** ವಲಯದಿಂದ **"ವಸತಿ"** ವಲಯಕ್ಕೆ ಭೂ ಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಛಿಸಿರುವುದಾಗಿ ತಿಳಿಸಿರುತ್ತಾರೆ.

ಸಹಿ/- ಸದಸ್ಯ-ಕಾರ್ಯದರ್ಶಿ ಹಾಗೂ
ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು,
ಆನೇಕಲ್ ಯೋಜನಾ ಪ್ರಾಧಿಕಾರ, ಆನೇಕಲ್.

ವಾಸಾಸಂ೦ಇ/ವಾ.ಪ್ರ/1694/ಅಡ್ಮಿನ್/2026-27

ಇಂಡಿಯನ್ ಬ್ಯಾಂಕ್ Indian Bank

ಇಂಡಿಯನ್ ಬ್ಯಾಂಕ್

ನೆಲ್ಲೂರು ಶಾಖೆ, ಗಾಂಧಿ ಪ್ರತಿಮೆ ಸಮೀಪ, ಟ್ರಂಕ್ ರೋಡ್, ನೆಲ್ಲೂರು-524001, ಆಂಧ್ರಪ್ರದೇಶ

ಸ್ಥಿರಾಸ್ತಿಗಳ ಮಾರಾಟಕ್ಕಾಗಿ ಮಾರಾಟ ಪ್ರಕಟಣೆ ಅನುಬಂಧ-IV-ಎ [ನಿಯಮ 8(6)ರ ನಿಬಂಧನೆ ನೋಡಿ]

ಭದ್ರತಾ ಹಿತಾಸಕ್ತಿ (ಜಾರಿ) ನಿಯಮಗಳು 2002ರ ನಿಯಮ 8(6)ರ ನಿಬಂಧನೆಯನ್ನು ಓದಿದಂತೆ ಹಣಕಾಸು ಆಸ್ತಿಗಳ ಭದ್ರತೆ ಮತ್ತು ಪುನರ್ನಿರ್ಮಾಣ ಹಾಗೂ ಭದ್ರತಾ ಹಿತಾಸಕ್ತಿ ಕಾಯ್ದೆ 2002ರಡಿ ಸ್ಥಿರಾಸ್ತಿಗಳ ಮಾರಾಟಕ್ಕಾಗಿ ಇ-ಹರಾಜು ಮಾರಾಟ ಪ್ರಕಟಣೆ.

ಈ ಮೂಲಕ ಸಾಮಾನ್ಯವಾಗಿ ಸಾರ್ವಜನಿಕರು ಮತ್ತು ನಿರ್ದಿಷ್ಟವಾಗಿ